**Akashvani : Bangalore**
**National Bulletin In Kannada**
**24.04.2024 / 7.35 am**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**24.04.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಎರಡನೇ ಹಂತದ ಸಾರ್ವತ್ರಿಕ ಲೋಕಸಭಾ ಚುನಾವಣೆ; ೧೩ ರಾಜ್ಯಗಳ ೮೯ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ

೨. ಕರ್ನಾಟಕದಲ್ಲಿ ೧೪ ಲೋಕಸಭಾ ಕ್ಷೇತ್ರಗಳ ಮೊದಲನೇ ಹಂತದ ಚುನಾವಣೆಗೆ ಸಕಲ ಸಿದ್ಧತೆ

೩. ಇಂದು ಡೆಹ್ರಾಡೂನ್‌ನ ಅರಣ್ಯ ಸಂಶೋಧನಾ ಸಂಸ್ಥೆಯ ಘಟಿಕೋತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ

೪. ರಕ್ಷಣಾ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆಯಿಂದ ಹಗುರವಾದ ಬುಲೆಟ್ ಪ್ರೂಫ್ ಜಾಕೆಟ್ ಅಭಿವೃದ್ಧಿ

೫. ವಿಶ್ವ ಅಥ್ಲೆಟಿಕ್ಸ್ ರಿಲೇ-೨೦೨೪ ಪಂದ್ಯಾವಳಿಗೆ ೧೫ ಸದಸ್ಯರ ರಿಲೇ ತಂಡವನ್ನು ಪ್ರಕಟಿಸಿದ ಭಾರತ

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಯ ಎರಡನೇ ಹಂತದ ಪ್ರಚಾರ ಕಾರ್ಯ ರಂಗೇರಿದೆ. ೧೩ ರಾಜ್ಯಗಳ ೮೯ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ ಬೀಳಲಿದೆ. ರಾಜಕೀಯ ಪಕ್ಷಗಳ ನಾಯಕರು, ತಮ್ಮ ತಮ್ಮ ಅಭ್ಯರ್ಥಿಗಳ ಪರ ರೋಡ್ ಶೋ ಮೂಲಕ ಮತಯಾಚನೆ ಮಾಡಿದರು. ಇನ್ನು ಹಲವು ಮುಖಂಡರು ಬಹಿರಂಗ ಪ್ರಚಾರ ನಡೆಸಿ, ತಮ್ಮ ಸಾಧನೆಗಳ, ಭರವಸೆಗಳ ಪಟ್ಟಿಯನ್ನು ಸಾರ್ವಜನಿಕರಿಗೆ ಬಿಡುಗಡೆ ಮಾಡಿದರು. ಕೇಂದ್ರದಲ್ಲಿರುವ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು, ಸರ್ಕಾರದ ಸಾಧನೆಯನ್ನು ಜನರ ಮುಂದಿಟ್ಟು ಮತಯಾಚಿಸಿದರು.

ಕಾಂಗ್ರೆಸ್, ಆಮ್‌ಆದ್ಮಿ, ಪಕ್ಷ, ಬಿಎಸ್‌ಪಿ, ಸಮಾಜವಾದಿ ಪಕ್ಷ ಸೇರಿದಂತೆ ಪ್ರಾದೇಶಿಕ ಪಕ್ಷಗಳ ಮುಖಂಡರು ಅಭ್ಯರ್ಥಿಗಳ ಪರ ಮತಯಾಚಿಸಿದರು. ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ, ಇಂದು ಛತ್ತೀಸ್‌ಗಢದ ಅಂಬಿಕಾಪುರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ನಿನ್ನೆ ರಾಜಸ್ಥಾನದಲ್ಲಿ ರ್‍ಯಾಲಿಯಲ್ಲಿ ಪಾಲ್ಗೊಂಡು, ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿ ಪ್ರಮಾಣ ರದ್ದಾಗುವುದಿಲ್ಲ. ತುಳಿತಕ್ಕೊಳಗಾದ ಜನರ ರಕ್ಷಣೆಗೆ ತಮ್ಮ ಪಕ್ಷ ಬದ್ಧವಾಗಿದೆ ಎಂದು ಹೇಳಿದರು.   ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ, ಇಂದು ಅಮರಾವತಿ ಜಿಲ್ಲೆಯ ಪರತ್‌ವಾಡದಲ್ಲಿ ಚುನಾವಣಾ ರ್‍ಯಾಲಿಯನ್ನದ್ದೇಶಿಸಿ ಭಾಷಣ ಮಾಡುವರು.

<><*<><>*><>

೨೦೨೪ರ ಸಾರ್ವತ್ರಿಕ ಚುನಾವಣೆಗೆ ಕರ್ನಾಟಕದಲ್ಲಿ ಬಹಿರಂಗ ಪ್ರಚಾರ ರಂಗೇರಿದೆ. ರಾಜಕೀಯ ಪಕ್ಷಗಳ ಮುಖಂಡರು ಬಿರುಸಿನ ಪ್ರಚಾರ ನಡೆಸಿದರೆ, ಇನ್ನು ಕೆಲವು ಮುಖಂಡರು ರೋಡ್ ಶೋ ಮೂಲಕ ಸಾರ್ವಜನಿಕರಿಗೆ ಮತನೀಡುವಂತೆ ಮನವಿ ಮಾಡಿದರು.  ಬಿಜೆಪಿ ಮುಖಂಡ ಅಮಿತ್ ಶಾ ಅವರು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ರೋಡ್ ಶೋ ಮೂಲಕ ಬಹಿರಂಗ ಪ್ರಚಾರ ನಡೆಸಿದರು. ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ ಚಿತ್ರದುರ್ಗದಲ್ಲಿ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಕೇಂದ್ರದಲ್ಲಿರುವ ಎನ್‌ಡಿಎ ಸರ್ಕಾರ, ನಿರುದ್ಯೋಗ ಪ್ರಮಾಣ ಏರಿಕೆಗೆ ಕಾರಣವಾಗಿದ್ದು, ಅಡುಗೆ ಅನಿಲ ಪೆಟ್ರೋಲ್ ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ದರ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಬಿಜೆಪಿಯೇತರ ರಾಜ್ಯ ಸರ್ಕಾರಗಳಿಗೆ ಅಗತ್ಯ ನೆರವನ್ನು ನೀಡುವಲ್ಲಿ ವಿಫಲರಾಗಿದ್ದಾರೆ ಎಂದು ದೂರಿದರು.  ಬಳಿಕ ಅವರು ಕಳೆದ ರಾತ್ರಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ರೋಡ್ ಶೋ ನಡೆಸಿದರು.

<><*<><>*><>

ಕರ್ನಾಟಕದಲ್ಲಿ ೧೪ ಲೋಕಸಭಾ ಕ್ಷೇತ್ರಗಳ ಮೊದಲನೇ ಹಂತದ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ತಿಳಿಸಿದೆ.  ಮೊದಲ ಹಂತದಲ್ಲಿ ನಾಡಿದ್ದು ಉಡುಪಿ-ಚಿಕ್ಕಮಗಳೂರು, ದಕ್ಷಿಣಕನ್ನಡ, ಹಾಸನ, ಮೈಸೂರು-ಕೊಡಗು, ಮಂಡ್ಯ, ಚಾಮರಾಜನಗರ, ತುಮಕೂರು,  ಬೆಂಗಳೂರು ಕೇಂದ್ರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ಚಿತ್ರದುರ್ಗ ಈ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ

ಸಿದ್ಧತೆ ಮಾಡಿಕೊಂಡಿದ್ದು, ಭದ್ರತೆಗಾಗಿ ಕೇಂದ್ರೀಯ ಮೀಸಲು ಪಡೆ ಹಾಗೂ ರಾಜ್ಯ ಮೀಸಲು ಪಡೆಗಳು ಜೊತೆಗೆ ಸಿಎಆರ್ ಪಡೆಗಳನ್ನು ನಿಯೋಜಿಸಲಾಗಿದೆ. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಲ್ಲಿ ವ್ಯಾಪಕ ಭದ್ರತೆ ಕೈಗೊಳ್ಳಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಚುನಾವಣಾ ಸಿಬ್ಬಂದಿಗಳಿಗೆ ಅಗತ್ಯ ತರಬೇತಿ ನೀಡಿದ್ದು, ನಾಳೆ ಮಸ್ಟರಿಂಗ್ ಕಾರ್ಯ ನಡೆಯಲಿದೆ. ಎರಡನೇ ಹಂತದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ೨೨೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮೇ ೭ ರಂದು ಈ ೧೪ ಕ್ಷೇತ್ರಗಳ ಚುನಾವಣೆಯ ಜೊತೆಗೆ ಸುರಪುರ ವಿಧಾನಸಭಾ ಕ್ಷೇತ್ರಕ್ಕೂ ಉಪ ಚುನಾವಣೆ ನಡೆಯಲಿದೆ. ಕಣದಲ್ಲಿ ೭ ಅಭ್ಯರ್ಥಿಗಳು ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿದ್ದಾರೆ ದಾವಣಗೆರೆಯಲ್ಲಿ ಅತಿ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿದ್ದರೆ, ವಿಜಯಪುರದಲ್ಲಿ ಅತಿ ಕಡಿಮೆ ೮ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ತಿಳಿಸಿದೆ.

<><*<><>*><>

ಬೆಂಗಳೂರು ಮಹಾನಗರ ವ್ಯಾಪ್ತಿಯ ಐದು ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಮುಖ್ಯ ಚುನಾವಣಾಧಿಕಾರಿಯೂ ಆಗಿರುವ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದ್ದಾರೆ. ೫ ಲೋಕಸಭಾ ಕ್ಷೇತ್ರಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ೮ ಸಾವಿರದ ೯೮೪ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ. ಅದರಲ್ಲಿ ೨ ಸಾವಿರದ ೩ ಮತಗಟ್ಟೆಗಳು ಸೂಕ್ಷ್ಮ ಹಾಗೂ ೨೫೩ ಅತಿ ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ೩೦ ವೆಚ್ಚ ವೀಕ್ಷಕರು ೩೦೫ ಮೈಕ್ರೋ ಅಬ್ಸರ್‌ವರ್ಸ್‌ಗಳನ್ನು ನೇಮಕ ಮಾಡಲಾಗಿದೆ. ೧೧ ಸಾವಿರದ ೭೯೪ ಸಿಆರ್‌ಪಿಎಫ್ ಪಡೆಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಅವರು ತಿಳಿಸಿದರು. ಜೊತೆಗೆ ಸ್ಥಳೀಯ ಪೊಲೀಸ್ ಸಿಬ್ಬಂದಿಯನ್ನೂ ಸಹ ಚುನಾವಣಾ ಭದ್ರತೆಗೆ ನಿಯೋಜಿಸಲಾಗಿದೆ. ಇಂದು ಸಂಜೆ ೬ ಗಂಟೆಯಿಂದ ಇದೇ ೨೬ ರಾತ್ರಿ ೧೨ ಗಂಟೆಯವರೆಗೆ ಈ ಭಾಗದಲ್ಲಿ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ ಬೆಂಗಳೂರು ನಗರಾದ್ಯಂತ ೧೪೪ನೇ ಸೆಕ್ಷನ್ ಜಾರಿಗೊಳಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ.

<><*<><>*><>

ಎರಡು ದಿನಗಳ ಉತ್ತರಾಖಂಡ್ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಡೆಹ್ರಾಡೂನ್‌ನಲ್ಲಿರುವ ಅರಣ್ಯ ಸಂಶೋಧನಾ ಸಂಸ್ಥೆ-ಎಫ್‌ಆರ್‌ಐನಲ್ಲಿ ಭಾರತೀಯ ಅರಣ್ಯ ಸೇವಾ ಪ್ರೊಬೇಷನರಿಗಳ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಇಂದಿರಾಗಾಂಧಿ ನ್ಯಾಷನಲ್ ಫಾರೆಸ್ಟ್ ಅಕಾಡೆಮಿಯ ೯೯ ಪ್ರೊಬೇಷನರಿಗಳು, ಮಿತ್ರ ರಾಷ್ಟ್ರ ಭೂತಾನ್‌ನ ಇಬ್ಬರು ತರಬೇತಿ ಅಧಿಕಾರಿಗಳು ಅಕಾಡೆಮಿಯ ೨೦೨೨-೨೪ ಕೋರ್ಸ್‌ನ ಪದವಿ ಪಡೆಯಲಿದ್ದಾರೆ. ಮಧ್ಯಪ್ರದೇಶ ರಾಜ್ಯವು ಪ್ರಸ್ತುತ ಬ್ಯಾಚ್‌ನಿಂದ ಗರಿಷ್ಠ ೧೫ ಅಧಿಕಾರಿಗಳನ್ನು ಪಡೆಯಲಿದೆ ಮತ್ತು ಉತ್ತರಾಖಂಡವು ಮೂರು ಅಧಿಕಾರಿಗಳ ಸೇವೆಯನ್ನು ಪಡೆಯಲಿದೆ.

<><*<><>*><>

ರಕ್ಷಣಾ ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆ- ಡಿಆರ್‌ಡಿಓ, ಅತ್ಯಧಿಕ ಅಪಾಯ ಎದುರಿಸುವಂತಹ ಹಗುರವಾದ ಬುಲೆಟ್ ಪ್ರೂಫ್ ಜಾಕೆಟ್ ಅನ್ನು ಯಶಸ್ವಿಯಾಗಿ ಅಭಿವೃದ್ಧಿಪಡಿಸಿದೆ. ಈ ಬುಲೆಟ್ ಪ್ರೂಫ್ ಜಾಕೆಟ್ ಅನ್ನು ಚಂಡೀಗಢದ ಟಿಬಿಆರ್‌ಎಲ್ ನಲ್ಲಿ ಯಶಸ್ವಿಯಾಗಿ ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ರಕ್ಷಣಾ ಸಚಿವಾಲಯದ ಪ್ರಕಟಣೆ ತಿಳಿಸಿದೆ. ಅತ್ಯಾಧುನಿಕ ವಿನ್ಯಾಸ ಹೊಂದಿರುವ ಈ ಜಾಕೆಟ್, ನವೀನ ರೀತಿಯಲ್ಲಿ ಸಿದ್ಧಪಡಿಸಲಾಗಿದ್ದು, ಅದು ಹಲವು ಬಾರಿ ಗುಂಡು ತಾಗಿದರೂ ಅದನ್ನು ಎದುರಿಸುವ ಶಕ್ತಿಯನ್ನು ಹೊಂದಿದೆ. ಡಿಆರ್‌ಡಿಓ ದ ಈ ಸಾಧನೆಗಾಗಿ ಡಿಆರ್‌ಡಿಓ ಅಧ್ಯಕ್ಷರು ಸಿಬ್ಬಂದಿಯನ್ನು ಅಭಿನಂದಿಸಿದ್ದಾರೆ.

<><*<><>*><>

ಕೃತಕ ಬುದ್ಧಿಮತ್ತೆ, ಬ್ಲಾಕ್ ಚೈನ್, ಮೆಷಿನ್ ಲರ್ನಿಂಗ್, ೬ಜಿ, ಕ್ವಾಂಟಮ್ ಕಂಪ್ಯೂಟಿಂಗ್ ತಂತ್ರಜ್ಞಾನ ಬಳಕೆಯಲ್ಲಿ ಭಾರತ ಅಗ್ರಸ್ಥಾನದಲ್ಲಿದೆ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಅವರು, ದೆಹಲಿಯಲ್ಲಿ ನಿನ್ನೆ ಅಖಿಲ ಭಾರತ ನಿರ್ವಹಣಾ ಒಕ್ಕೂಟದ ವಾರ್ಷಿಕ ಸಭೆಯನ್ನುದ್ದೇಶಿಸಿ ಮಾತನಾಡಿ, ರಾಷ್ಟ್ರೀಯ ಕ್ವಾಂಟಮ್ ಮಿಷನ್ ಅಡಿ ಈಗಾಗಲೇ ೬ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ತಂತ್ರಜ್ಞಾನ ಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ಕ್ವಾಂಟಮ್ ತಂತ್ರಜ್ಞಾನದಲ್ಲಿ ವೈಜ್ಞಾನಿಕ ಮತ್ತು ಕೈಗಾರಿಕಾ ಅಭಿವೃದ್ಧಿಯ ಬಗ್ಗೆ ವ್ಯಾಪಕ ಕಾರ್ಯಗಳು ನಡೆದಿವೆ ಎಂದರು. ಹೊಸ ಹೊಸ ತಂತ್ರಜ್ಞಾನಗಳ ಅಳವಡಿಕೆ ಹಾಗೂ ಡಿಜಿಟಲೀಕರಣದಲ್ಲಿ ದೇಶ ಮುಂಚೂಣಿಯಲ್ಲಿದೆ. ನೇರ ನಗದು ವರ್ಗಾವಣೆಯಂತಹ ಕ್ರಮಗಳಿಂದಾಗಿ ಭ್ರಷ್ಟಾಚಾರ ಗಣನೀಯವಾಗಿ ತಗ್ಗಿದೆ. ಪಾರದರ್ಶಕ ಹಾಗೂ ಉತ್ತರದಾಯಿ ಸರ್ಕಾರದಿಂದಾಗಿ ದೇಶ ಪ್ರಗತಿಯತ್ತ ಸಾಗಿದ್ದು, ಉತ್ತಮ ವಾತಾವರಣ ನೆಲೆಸಿದೆ ಎಂದು ಜಗದೀಪ್ ಧನ್‌ಕರ್ ಹೇಳಿದರು.

<><*<><>*><>

ವಿಶ್ವವಿದ್ಯಾಲಯ ಅನುದಾನ ಆಯೋಗ- ಯುಜಿಸಿ, ದೆಹಲಿಯಲ್ಲಿಂದು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಾಂಸ್ಥಿಕ ಅಭಿವೃದ್ಧಿ ಯೋಜನೆ ಕುರಿತ ಕಾರ್ಯಾಗಾರವನ್ನು ಆಯೋಜಿಸಿದೆ. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಶೈಕ್ಷಣಿಕ ಹಾಗೂ ವೃತ್ತಿಪರ ಗುಣಮಟ್ಟ ಕಾಯ್ದುಕೊಳ್ಳುವುದು ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಗೆ ಪೂರಕವಾಗಿ ದೂರದೃಷ್ಟಿಯ ಹಾಗೂ ಭವಿಷ್ಯಕ್ಕೆ ಅಗತ್ಯವಾದ ನೀಲನಕ್ಷೆಯನ್ನು ರೂಪಿಸುವುದು ಈ ಕಾರ್ಯಾಗಾರದ ಆಯೋಜನೆಯ ಉದ್ದೇಶವಾಗಿದೆ.

<><*<><>*><>

ಮುಂದಿನ ವಿಶ್ವ ಅಥ್ಲೆಟಿಕ್ಸ್ ರಿಲೇ ೨೦೨೪ ಪಂದ್ಯಾವಳಿಗಾಗಿ ಭಾರತವು ೧೫ ಸದಸ್ಯರ ರಿಲೇ ತಂಡವನ್ನು ಪ್ರಕಟಿಸಿದೆ. ಮುಂಬರುವ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತಾ ಪಂದ್ಯವಾಗಿರುವ ಸ್ಪರ್ಧೆಯು ಬಹಾಮಾಸ್‌ನ ನಸ್ಸೌದಲ್ಲಿ ಮೇ ೪ ರಿಂದ ೫ ರವರೆಗೆ ನಡೆಯಲಿದೆ. ಈ ಕ್ರೀಡಾಪಟುಗಳು ಪುರುಷರು, ಮಹಿಳೆಯರು ಮತ್ತು ಮಿಶ್ರ ವಿಭಾಗಗಳಲ್ಲಿ ೪x೪೦೦ ಮೀಟರ್ ರಿಲೇಗಳಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಪುರುಷರ ೪x೪೦೦ ಮೀಟರ್ ರಿಲೇಗೆ ಎಂಟು ಸದಸ್ಯರ ತಂಡವನ್ನು ಹೆಸರಿಸಲಾಗಿದೆ. ತಂಡದಲ್ಲಿ ೨೦೨೩ ರ ಹ್ಯಾಂಗ್‌ಝೌ ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತರಾದ ಅಮೋಜ್ ಜಾಕೋಬ್, ಮುಹಮ್ಮದ್ ಅನಸ್ ಯಾಹಿಯಾ, ಮುಹಮ್ಮದ್ ಅಜ್ಮಲ್ ಮತ್ತು ರಾಜೇಶ್ ರಮೇಶ್ ಇದ್ದಾರೆ. ತಂಡವು ೨೦೧೮ ರ ಏಷ್ಯನ್ ಗೇಮ್ಸ್ ಮಿಶ್ರ ರಿಲೇ ಚಿನ್ನದ ಪದಕ ವಿಜೇತೆ ಅರೋಕಿಯಾ ರಾಜೀವ್, ನೋಹ್ ನಿರ್ಮಲ್ ಟಾಮ್, ಯಶಸ್ ಪಾಲಾಕ್ಷ ಮತ್ತು ಅವಿನಾಶ್ ಕೃಷ್ಣಕುಮಾರ್ ಅವರನ್ನು ಒಳಗೊಂಡಿದೆ. ಮಹಿಳೆಯರ ೪ x೪೦೦ಮೀ ರಿಲೇಗೆ, ಏಷ್ಯನ್ ಗೇಮ್ಸ್‌ನಲ್ಲಿ ಚಿನ್ನದ ಪದಕ ವಿಜೇತೆ ಎಂ.ಆರ್.ಪೂವಮ್ಮ ನೇತೃತ್ವದ ಏಳು ಸದಸ್ಯರ ತಂಡವನ್ನು ಪ್ರಕಟಿಸಲಾಗಿದೆ. ಮಿಶ್ರ ೪ x ೪೦೦ ಮೀ ರಿಲೇಯಲ್ಲಿ ವಿತ್ಯಾ ರಾಮರಾಜ್, ರಾಜೇಶ್ ರಮೇಶ್, ಜ್ಯೋತಿಕಾ ಶ್ರೀ ದಂಡಿ, ಅಮೋಜ್ ಜಾಕೋಬ್, ರೂಪಲ್ ಮತ್ತು ಯಶಸ್ ಪಾಲಾಕ್ಷ ದೇಶವನ್ನು ಪ್ರತಿನಿಧಿಸಲಿದ್ದಾರೆ.